For more job news visit : www.kpscvaani.com

"ನೀರನ್ನು ಮಿತವಾಗಿ ಬಳಸಿ''
''ಕನ್ನಡದಲ್ಲೇ ವ್ಯವಹರಿಸಿ''

Ph:080-22945102

# ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ

**BANGALORE WATER SUPPLY & SEWERAGE BOARD**

1st Floor, Cauvery Bhavan, K.G.Road, Bangalore-560009

**No.: BWSSB/ADMN/OTH/18/2025** **Date:15-07-2025**

## ಅಧಿಸೂಚನೆ

**ವಿಷಯ:** ಮಂಡಳಿಯಲ್ಲಿನ ಕಾನೂನು ಅಧಿಕಾರಿ ಹುದ್ದೆಗೆ ಗುತ್ತಿಗೆ ಆಧಾರದ ಮೇರೆಗೆ ನೇಮಕ ಮಾಡಿಕೊಳ್ಳುವ ಬಗ್ಗೆ

**ಉಲ್ಲೇಖ:** ಮಾನ್ಯ ಅಧ್ಯಕ್ಷರ ಅನುಮೋದನೆಯೊಂದಿಗೆ

******

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಲ್ಲಿ ಕಾನೂನು ಅಧಿಕಾರಿ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ತೀರ್ಮಾನಿಸಲಾಗಿದೆ. ಈ ಹುದ್ದೆಯಲ್ಲಿ ಸೇವೆ ಸಲ್ಲಿಸಲು ಇಚ್ಚಿಸುವ, ಸೇವಾ ವಿಷಯಗಳಲ್ಲಿ ನುರಿತ ಹಾಗೂ ಹೆಚ್ಚಿನ ಅನುಭವವುಳ್ಳ ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ವಿವರಗಳು ಈ ಕೆಳಕಂಡಂತಿರುತ್ತವೆ.

1. ಸದರಿಯವರ ಸಂಭಾವನೆಯನ್ನು ಮಾಹೆಯಾನ ₹.1,15,000/- ಗಳಿಗೆ ಹಾಗೂ ವಾಹನ ಭತ್ಯೆಯನ್ನು ಮಾಹೆಯಾನ ₹ 35,000/-ಗಳಿಗೆ ನಿಗದಿಪಡಿಸಲಾಗಿದೆ.
2. ಸದರಿಯವರ ಸೇವೆಯನ್ನು 02 ವರ್ಷಗಳ ಅವಧಿಗೆ ನೇಮಕ ಮಾಡಲಾಗುತ್ತಿದ್ದು, 01 ವರ್ಷದ ನಂತರ ಅವರ ಕಾರ್ಯನಿರ್ವಹಣೆಯ ಆಧಾರದ ಮೇಲೆ ನಂತರದ ಮುಂದಿನ 01 ವರ್ಷದವರೆಗೆ ಮುಂದುವರೆಸಲಾಗುವುದು.

ಕಾನೂನು ಸಲಹೆಗಾರರ ಕರ್ತವ್ಯಗಳು ಹಾಗೂ ನಿಬಂಧನೆಗಳು ಈ ಕೆಳಕಂಡಂತಿರುತ್ತವೆ.

**ಕರ್ತವ್ಯಗಳು:-**

1. The Legal Cell in BWSSB is headed by the Law Officer who is a retired District and Sessions Judge to deal with all legal matters pertaining Board.
2. To give legal opinion regarding all issues related to Board.
3. To interpret laws, statues, rules, regulations and to furnish opinion, in consulted matters.
4. To prepare pleadings in cases filed by and against the Board before Legal Fora.
5. To give advice and instructions to the Standing Counsel of the Board in pending cases.

For more job news visit : www.kpscvaani.com

6. The Law Officer is primarily responsible for scrutiny of para wise remarks, draft statement of objections/written statements.
7. The other important function is to monitor pending litigations against the Board, securing copies of Judgments and forwarding the same to the concerned Branches/ Sections with appropriate legal action to be taken.
8. He/She is also required to offer his/her legal opinion as to whether an appeal should be preferred or otherwise. He/She will also assist the Board on any issue which requires legal advice.
9. The Law Officer will also assist the Board as and when required in any matter of concern.

**ನಿಬಂಧನೆಗಳು/ ಷರತ್ತುಗಳು:-**

1. ಸದರಿಯವರು ಕಚೇರಿಯ ಅವಧಿಯಲ್ಲಿ ಕರ್ತವ್ಯಕ್ಕೆ ಹಾಜರಿರಬೇಕು ಹಾಗೂ ಮಂಡಳಿಯ ಮಾನ್ಯ ಅಧ್ಯಕ್ಷರು, ಮುಖ್ಯ ಆಡಳಿತಾಧಿಕಾರಿ ಹಾಗೂ ಕಾರ್ಯದರ್ಶಿಯವರೊಂದಿಗೆ ಸಮಾಲೋಚನೆಗೆ ಲಭ್ಯವಿರತಕ್ಕದ್ದು ಮತ್ತು ಅವರಿಗೆ ಕಾನೂನು ವಿಷಯದಲ್ಲಿ ಸಹಕಾರ ಹಸ್ತ ನೀಡುವುದು.
2. ಕಚೇರಿ ವ್ಯವಹಾರಗಳಿಗೆ ಸಂಬಂಧಿಸಿದಂತೆ ಅಧ್ಯಕ್ಷರು ಮತ್ತು ಕಾರ್ಯದರ್ಶಿಯಿಂದ ಬರುವ ಯಾವುದೇ ಕಡತಗಳಿಗೆ ಕಾನೂನು ಸಲಹೆ ನೀಡತಕ್ಕದ್ದು.
3. ಕಾಲಕಾಲಕ್ಕೆ ಕಳುಹಿಸಲ್ಪಡುವ ಕಡತಗಳಲ್ಲಿನ ಪ್ರಸ್ತಾವನೆಗೆ ಕಾನೂನು ಸಲಹೆಗಳನ್ನು/ಪರಿಣಿತ ಸಲಹೆಗಳನ್ನು ನೀಡುವುದು.
4. ಮಂಡಳಿಯಿಂದ ಹೂಡಲ್ಪಟ್ಟ ಅಥವಾ ಮಂಡಳಿಯ ವಿರುದ್ಧದ ಎಲ್ಲ ಪ್ರಕರಣಗಳ ಸಂಕ್ಷಿಪ್ತ ಟಿಪ್ಪಣಿ ತಯಾರಿಸುವುದು ಹಾಗೂ ಅವುಗಳ ವಿಶ್ಲೇಷಣೆಯನ್ನು ಕಾಲಕಾಲಕ್ಕೆ ಕಾರ್ಯದರ್ಶಿಯವರಿಗೆ ಮಂಡಿಸತಕ್ಕದ್ದು.
5. ಮಂಡಳಿಯ ವಿರುದ್ಧದ ಅಥವಾ ಮಂಡಳಿಯ ಹಿತಾಸಕ್ತಿಗೆ ಧಕ್ಕೆಬರುವಂತಹ ಯಾವುದೇ ಪ್ರಕರಣದ ಯಾವುದೇ ಖಾಸಗಿ ವ್ಯಕ್ತಿಗಳಿಗೆ ಮಾರ್ಗದರ್ಶನ ನೀಡಬಾರದು.
6. ಕಾಲಕಾಲಕ್ಕೆ ಅವರಿಗೆ ವಹಿಸಲಾಗುವ ಕಾನೂನು ಪ್ರಕರಣ ಅಥವಾ ಕಾನೂನಿಗೆ ಸಂಬಂಧಿಸಿದ ಇತರೆ ತೊಡಕುಗಳ ನಿವಾರಣೆಯಲ್ಲಿ ಸಹಕರಿಸತಕ್ಕದ್ದು.
7. ವಿವಿಧ ನ್ಯಾಯಾಲಯಗಳಲ್ಲಿ ಸಲ್ಲಿಸಬೇಕಾಗುವ ಅಫಿಡೆವಿಟ್ ಪತ್ರದ ಸತ್ಯಪನೆಯನ್ನು ಮಂಡಳಿಯ ಪರವಾಗಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸುವ ಮುನ್ನ ಪ್ರಮಾಣೀಕರಿಸಬೇಕು.
8. ಎಲ್ಲಾ ನ್ಯಾಯಾಲಯ ಪ್ರಕರಣಗಳ ಕಡತಗಳನ್ನು ಮುಖ್ಯ ಆಡಳಿತಾಧಿಕಾರಿ ಹಾಗೂ ಕಾರ್ಯದರ್ಶಿ ಮತ್ತು ಅಧ್ಯಕ್ಷರು, ಬೆಂಗಳೂರು ಜಲಮಂಡಳಿ ಅವರ ಮುಖಾಂತರ ಯಾವಾಗ ಮಂಡಳಿಯ ಅಧ್ಯಕ್ಷರ ಒಪ್ಪಿಗೆ ಅವಶ್ಯಕತೆ ಇದ್ದಲ್ಲಿ ಸಮೂಚಿತ ಮಾರ್ಗದಲ್ಲಿ ಪ್ರಕ್ರಿಯೆ ನಡೆಸುವುದು.
9. ಅವರಿಗೆ ವಹಿಸಲಾದ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಂಡಳಿಯನ್ನು ಪ್ರತಿನಿಧಿಸುವ ವಕೀಲರುಗಳ ಮಾರ್ಗದರ್ಶನ/ಮೇಲ್ವಿಚಾರಣೆ ನಡೆಸಿ ಕಾರ್ಯದರ್ಶಿಯವರಿಗೆ ವರದಿ ಸಲ್ಲಿಸತಕ್ಕದ್ದು.
10. ವಕೀಲರ ವೃತ್ತಿ ಶುಲ್ಕ/ನ್ಯಾಯಾಲಯ ಶುಲ್ಕ ಇತ್ಯಾದಿ ಕುರಿತು ಮುಆಅ-ಕಾ ರವರಿಗೆ ಸೂಕ್ತ ಪ್ರಸ್ತಾವನೆ ಸಲ್ಲಿಸುವುದು.
11. ಸದರಿಯವರು ಮಂಡಳಿಯಿಂದ ತಮಗೆ ನೀಡಲಾದ ಸಿಬ್ಬಂದಿ ವರ್ಗದವರ ಸಹಯೋಗದೊಂದಿಗೆ ಕಾನೂನು ಶಾಖೆಯ ಸುಗಮ ನಿರ್ವಹಣೆಗಾಗಿ ಸಂಪೂರ್ಣ ಜವಾಬ್ದಾರಿ ಹೊರತಕ್ಕದ್ದು,
12. ದಿನಾಂಕ: (ಅಧಿಸೂಚನೆಯ ಪ್ರಕಟಣೆ) ಕ್ಕೆ 65 ವರ್ಷ ಮೀರದ ಆರೋಗ್ಯವಾಗಿ ಸದೃಢರಾಗಿರುವ ಮತ್ತು ಬೆಂಗಳೂರು ನಿವಾಸಿಯಾಗಿರುವ ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಅರ್ಜಿ ಸಲ್ಲಿಸತಕ್ಕದ್ದು.

For more job news visit : www.kpscvaani.com

13. ಆಯ್ಕೆ ಅಧಿಸೂಚನೆ ಹೊರಡಿಸಲ್ಪಟ್ಟು, ನೇಮಕಾತಿ ಆದೇಶ ತಲುಪಿದ 07 ದಿನಗಳೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು.
14. ಸದರಿಯವರ ಅವಧಿ ಮುಗಿಯುವ 01 ತಿಂಗಳ ಮೊದಲು ನೋಟೀಸ್ ನೀಡುವ ಮೂಲಕ ಬಿಡುಗಡೆಗೊಳ್ಳಬಹುದು ಅಥವಾ ಮಂಡಳಿಯಿಂದ ಬಿಡುಗಡೆ ಮಾಡಬಹುದು.
15. ಅವಧಿ ಮುಗಿಯುವ 01 ತಿಂಗಳ ಮೊದಲು ನೋಟೀಸ್ ನೀಡದ ಸಂದರ್ಭದಲ್ಲಿ ಹಾಗೂ ತಕ್ಷಣವೇ ಬಿಡುಗಡೆಗೊಳಿಸುವಂತೆ ಕೋರಿದ ಸಂದರ್ಭದಲ್ಲಿ 01 ತಿಂಗಳ ವೇತನವನ್ನು ಬಿಟ್ಟು ಕೊಡತಕ್ಕದ್ದು.
16. ಸದರಿ ಹುದ್ದೆಯಲ್ಲಿ ಸೇವೆ ಸಲ್ಲಿಸಲು ಇಚ್ಛಿಸುವವರು ನ್ಯಾಯಾಂಗ ಇಲಾಖೆಯಲ್ಲಿ ಜಿಲ್ಲಾ ನ್ಯಾಯಾಧೀಶರಾಗಿ ಕನಿಷ್ಠ 05 ವರ್ಷಗಳ ಕರ್ತವ್ಯ ನಿರ್ವಹಿಸಿ ನಿವೃತ್ತಿ ಹೊಂದಿರಬೇಕು. ಹಿಂದಿನ ಸೇವೆಯಿಂದ ವಜಾಗೊಂಡಿರಬಾರದು ಹಾಗೂ ಯಾವುದೇ ಇಲಾಖಾ ವಿಚಾರಣೆ/ ಶಿಸ್ತುಕ್ರಮಗಳಿಂದ ಹೊರತಾಗಿರಬೇಕು.

ಆದ್ದರಿಂದ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸೇವಾ ವಿಷಯಗಳಲ್ಲಿ ನುರಿತ ಹಾಗೂ ಹೆಚ್ಚಿನ ಅನುಭವ ಹಾಗೂ ಮಾಹಿತಿ ಉಳ್ಳ ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಿಂದ ಅರ್ಜಿಯನ್ನು ಆಹ್ವಾನಿಸುತ್ತಿದ್ದು, ಆಸಕ್ತರು ಅರ್ಜಿಯೊಂದಿಗೆ ತಮ್ಮ ಹೆಸರು, ವಿಳಾಸ, ಜನ್ಮ ದಿನಾಂಕ, ವಿದ್ಯಾರ್ಹತೆ, ಸೇವಾ ವಿವರಗಳನ್ನೊಳಗೊಂಡ (ವೈಯಕ್ತಿಕ ವಿವರ, ಸರ್ಕಾರಿ ಸೇವೆ ಸಲ್ಲಿಸಿರುವ ವಿವರ ಹಾಗೂ ಪಿಂಚಣಿ ಪುಸ್ತಕದ ನಕಲು ಪ್ರತಿ) ಸಂಪೂರ್ಣ ಮಾಹಿತಿ (Curriculum vitae) ಮತ್ತು ಅಗತ್ಯ ದಾಖಲೆಗಳನ್ನು ಲಗತ್ತಿಸಿ ಅಧಿಸೂಚನೆ ಹೊರಡಿಸಿದ 15 ದಿನಗಳೊಳಗೆ ಮುಚ್ಚಿದ ಲಕೋಟೆಯಲ್ಲಿ "ಮುಖ್ಯ ಆಡಳಿತಾಧಿಕಾರಿ ಹಾಗೂ ಕಾರ್ಯದರ್ಶಿ, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, 1ನೇ ಮಹಡಿ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560009" ಈ ವಿಳಾಸಕ್ಕೆ ಖುದ್ದಾಗಿ ಅಥವಾ ಅಂಚೆ ಮುಖಾಂತರ ಸಲ್ಲಿಸಲು ಸೂಚಿಸಿದೆ.

ಮುಖ್ಯ ಆಡಳಿತಾಧಿಕಾರಿ ಹಾಗೂ ಕಾರ್ಯದರ್ಶಿ,
ಬೆಂಗಳೂರು ಜಲಮಂಡಳಿ.

**ಪ್ರತಿಯನ್ನು:**

1. ಮಾನ್ಯ ಅಧ್ಯಕ್ಷರ ಅವಗಾಹನೆಗಾಗಿ ಸಲ್ಲಿಸಿದೆ.
2. ಸಾರ್ವಜನಿಕರ ಮಾಹಿತಿಗಾಗಿ ಮಂಡಳಿಯ ಅಧಿಕೃತ ವೆಬ್‌ಸೈಟ್ ನಲ್ಲಿ ಪ್ರಕಟಿಸಲು ಕಾನಿಅ (ಎಂ.ಐ.ಎಸ್) ರವರ ಸೂಕ್ತ ಕ್ರಮಕ್ಕಾಗಿ.